**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ರವರು ಮೈಸೂರು ಜಿಲ್ಲೆ, ತಿ.ನರಸೀಪುರ ತಾಲ್ಲೂಕು, ಮುಡುಕುತೊರೆ ಶ್ರೀ ಭ್ರಮರಾಂಬ ಸಹಿತ ಮಲ್ಲಿಕಾರ್ಜುನಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರ ಕಾಮಗಾರಿಯು ಮಂಜೂರಾಗಿ ಎರಡು-ಮೂರು ವರ್ಷಗಳೇ ಕಳೆದರೂ ಆಮೆ ಗತಿಯಲ್ಲಿ ಕಾಮಗಾರಿ ನಡೆಯುತ್ತಿದ್ದು, ಇದರಿಂದಾಗಿ ಶ್ರೀಕ್ಷೇತ್ರಕ್ಕೆ ಬರುವ ಭಕ್ತಾದಿಗಳಿಗೆ ತೊಂದರೆಯುಂಟಾಗಿರುವ ಕುರಿತು ಹಾಗೂ ಶ್ರೀಕ್ಷೇತ್ರವು ಮೈಸೂರು, ಚಾಮರಾಜನಗರ, ಮಂಡ್ಯ, ಬೆಂಗಳೂರು ಗ್ರಾಮಾಂತರ, ರಾಮನಗರ ಸೇರಿದಂತೆ ಬೆಂಗಳೂರು ನಗರದಲ್ಲಿಯೂ ಸಹ ಲಕ್ಷಾಂತರ ಭಕ್ತರನ್ನು ಹೊಂದಿರುತ್ತದೆ. ಶ್ರೀಕ್ಷೇತ್ರದಲ್ಲಿ ಜಾತ್ರೆ ವೇಳೆಯಲ್ಲಿ ನಡೆಯುವ ದನಗಳ ಜಾತ್ರೆಗೆ ರಾಜ್ಯದ ವಿವಿಧ ಮೂಲೆಗಳಿಂದಷ್ಟೇ ಅಲ್ಲದೆ ಹೊರ ರಾಜ್ಯಗಳಿಂದಲೂ ರೈತರು ಆಗಮಿಸಿ ದನ-ಕರುಗಳನ್ನು ಕೊಂಡು ಕೊಳ್ಳುವ ಪ್ರವೃತ್ತಿಯಿದ್ದು, ಕೋಟ್ಯಾಂತರ ರೂಪಾಯಿಗಳ ವ್ಯಾಪಾರ ವಹಿವಾಟು ನಡೆಯುತ್ತದೆ. ಶ್ರೀಕ್ಷೇತ್ರವು ಶ್ರೀಶೈಲಂನ ನಂತರದ ಶಿವ ಪಾರ್ವತಿಯರ ಸ್ಥಳವಾಗಿದ್ದು ಇತಿಹಾಸ ಪ್ರಸಿದ್ಧವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸದರಿ ದೇವಸ್ಥಾನಕ್ಕೆ ಪ್ರಾಧಿಕಾರ ರಚನೆ ಮಾಡುವ ಕುರಿತು ನಿಯಮ 72ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಹೇಳಿಕೆ.**

*********

**ಉತ್ತರ:-**

- ಮೈಸೂರು ಜಿಲ್ಲೆ, ತಿ.ನರಸೀಪುರ ತಾಲ್ಲೂಕು, ತಲಕಾಡು ಹೋಬಳಿ, ತಲಕಾಡು ಗ್ರಾಮದಲ್ಲಿ ಶ್ರೀ ವೈದ್ಯನಾಥೇಶ್ವರ ಸ್ವಾಮಿ ಮತ್ತು ಸಮೂಹ ದೇವಾಲಯಗಳು ಧಾರ್ಮಿಕ ದತ್ತಿ ಇಲಾಖೆಗೆ ಸೇರಿದ ಪ್ರವರ್ಗ ಎ ಅಧಿಸೂಚಿತ ಸಂಸ್ಥೆಯಾಗಿರುತ್ತದೆ. ಈ ಸಮೂಹ ದೇವಾಲಯಗಳಲ್ಲಿ ಮುಡುಕುತೊರೆ ಶ್ರೀ ಭ್ರಮರಾಂಬ ಸಹಿತ ಮಲ್ಲಿಕಾರ್ಜುನಸ್ವಾಮಿ ದೇವಸ್ಥಾನವು ಒಂದಾಗಿರುತ್ತದೆ. ಶ್ರೀಕ್ಷೇತ್ರವು ಶ್ರೀಶೈಲಂನ ನಂತರದ ಶಿವಪಾರ್ವತಿಯರ ಸ್ಥಳವಾಗಿದ್ದು, ಇತಿಹಾಸ ಪ್ರಸಿದ್ಧವಾಗಿದೆ.
- ಶ್ರೀ ವೈದ್ಯನಾಥೇಶ್ವರಸ್ವಾಮಿ ದೇವಾಲಯಗಳಲ್ಲಿ ಶ್ರೀ ಕೀರ್ತಿ ನಾರಾಯಣಸ್ವಾಮಿ ದೇವಸ್ಥಾನ, ಶ್ರೀವೀರಭದ್ರೇಶ್ವರಸ್ವಾಮಿ ದೇವಸ್ಥಾನ, ಶ್ರೀ ಪಾತಾಳೇಶ್ವರ, ಶ್ರೀ ಮರಳೇಶ್ವರ, ಶ್ರೀ ಚೌಡೇಶ್ವರಿ, ಶ್ರೀ ಬಂಡರಸಮ್ಮ, ಶ್ರೀ ಅರ್ಕೇಶ್ವರ ಹಾಗೂ ಮುಡುಕುತೊರೆ ಶ್ರೀ ಭ್ರಮರಾಂಭ ಸಹಿತ ಮಲ್ಲಿಕಾರ್ಜುನ ಸ್ವಾಮಿ ದೇವಾಲಯಗಳು ಒಳಗೊಂಡಿರುತ್ತದೆ. ಈ ಸಮೂಹ ದೇವಾಲಯಗಳಲ್ಲಿ ಶ್ರೀ ಭ್ರಮರಾಂಭ ಸಹಿತ ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನವು ಶಿಥಿಲಗೊಂಡಿದ್ದು, ಈ ದೇವಸ್ಥಾನವನ್ನು ಹೊರತುಪಡಿಸಿ ಉಳಿದ ಸಮೂಹ ದೇವಾಲಯಗಳಿಗೆ ಆಗಮಿಸುವ ಯಾತ್ರಾರ್ಥಿಗಳಿಗೆ ಶುದ್ಧ ಕುಡಿಯುವ ನೀರು, ಶೌಚಾಲಯ, ಸ್ನಾನ ಗೃಹ, ಮಹಿಳೆಯರ ಬಟ್ಟೆ ಬದಲಾಯಿಸುವ ಕೊಠಡಿಗಳು, ಹಾಲುಣಿಸುವ ಕೇಂದ್ರ, ಸುರಕ್ಷತೆಯ ದೃಷ್ಟಿಯಿಂದ ಸಿಸಿ ಕ್ಯಾಮೆರಾ ಮತ್ತು 12 ಕೊಠಡಿಗಳಿರುವ ಯಾತ್ರಿನಿವಾಸ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ.
- ಶ್ರೀ ಮಲ್ಲಿಕಾರ್ಜುನಸ್ವಾಮಿ ಮತ್ತು ಶ್ರೀ ಭ್ರಮರಾಂಭ ದೇವಾಲಯಗಳ ಪುನರ್ ನಿರ್ಮಾಣ ಸಂಬಂಧ ಒಟ್ಟು ರೂ.1600-00 ಲಕ್ಷಗಳ ಅಂದಾಜುಪಟ್ಟಿಗೆ ಸರ್ಕಾರದ ಆದೇಶ ಸಂಖ್ಯೆ:ಕಂಇ/12/ಮುಅಕಾ/2020, ದಿನಾಂಕ:21-11-2020ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.
- ಶ್ರೀ ಮಲ್ಲಿಕಾರ್ಜುನಸ್ವಾಮಿ ಮತ್ತು ಶ್ರೀ ಭ್ರಮರಾಂಭ ದೇವಾಲಯವು ಸಂಪೂರ್ಣ ಶಿಥಿಲವಾಗಿದ್ದ ಕಾರಣ ಜೀರ್ಣೋದ್ಧಾರಗೊಳಿಸಲು ಕಳೆದ 2-3 ವರ್ಷಗಳ ಹಿಂದೆ ಜಿಲ್ಲಾಧಿಕಾರಿಗಳ ಹಂತದಲ್ಲಿ ಕ್ರಮವಹಿಸಿ, ಜೀರ್ಣೋದ್ಧಾರ ಕಾಮಗಾರಿ ಕೈಗೊಂಡಿದ್ದು, ಸದರಿ ಕಾಮಗಾರಿಯ ಅಳತೆ ಮತ್ತು ಪ್ರಮಾಣದಲ್ಲಿ ವ್ಯತ್ಯಾಸಕಂಡು ಬಂದ ಕಾರಣ ಕಾಮಗಾರಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ.
- ಈ ಸಂಬಂಧ ಸಾರಿಗೆ ಮತ್ತು ಮುಜರಾಯಿ ಸಚಿವರು ಹಾಗೂ ಕರ್ನಾಟಕ ರಾಜ್ಯ ವಾಸ್ತು ಶಿಲ್ಪ ಸಮಿತಿಯವರು ದಿನಾಂಕ:**21.08.2024** ರಂದು ಈ ದೇವಾಲಯಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ದೇವಾಲಯದ ಹಿಂದಿನ ಅಭಿವೃದ್ಧಿ ಸಮಿತಿಯವರು / ಅಧಿಕಾರಿಗಳು / ಸಿಬ್ಬಂದಿಗಳು / ಗ್ರಾಮಸ್ಥರುಗಳು

ಉಪಸ್ಥಿತರಿದ್ದು, ಅವರುಗಳಿಂದ ವಿಭಿನ್ನ ಅಭಿಪ್ರಾಯಗಳು ಬಂದ ಕಾರಣ, ಈ ಹಿಂದೆ ಇದ್ದ ಅಳತೆ ಪ್ರಮಾಣಕ್ಕನುಗುಣವಾಗಿ ಜೀರ್ಣೋದ್ಧಾರಗೊಳಿಸುವುದು ಸೂಕ್ತವೆಂದು ಅಭಿಪ್ರಾಯ ವ್ಯಕ್ತಪಡಿಸಿ ಎಲ್ಲರೂ ಸಹಮತಿ ನೀಡಿರುವುದರಿಂದ, ಸದರಿ ದೇವಾಲಯವು ಈ ಹಿಂದೆ ಇದ್ದ ಅಳತೆ ಪ್ರಮಾಣಕ್ಕೆ ಅನುಗುಣವಾಗಿ ನೀಲ ನಕ್ಷೆ ರಚಿಸಿ ನಿಯಮಾನುಸಾರ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯಲು ಸಾರಿಗೆ ಮತ್ತು ಮುಜರಾಯಿ ಸಚಿವರು ನಿರ್ದೇಶನ ನೀಡಿದ್ದರ ಹಿನ್ನಲೆಯಲ್ಲಿ ಕರ್ನಾಟಕ ರಾಜ್ಯ ಮುಖ್ಯ ವಾಸ್ತು ಶಿಲ್ಪಿಗಳು, ಲೋಕೋಪಯೋಗಿ ಇಲಾಖೆ ರವರಿಂದ ನೀಲ ನಕ್ಷೆಯನ್ನು ತಯಾರಿಸಿದ್ದು, ವಾಸ್ತು ಶಿಲ್ಪ ಸಮಿತಿಯ ದಿನಾಂಕ: **05.10.2024** ರಂದು ನಡೆದ ಸಭೆಯಲ್ಲಿ ನೀಲ ನಕ್ಷೆಗೆ ಅನುಮೋದನೆ ನೀಡಲಾಗಿರುತ್ತದೆ.

- ಸರ್ಕಾರದ ಆದೇಶ ಸಂಖ್ಯೆ:ಟಿಓಆರ್27 ಟಿಡಿಪಿ 2024(6), ಬೆಂಗಳೂರು, ದಿನಾಂಕ:27-02-2024ರಂತೆ ಪ್ರವಾಸೋದ್ಯಮ ಇಲಾಖೆಯಿಂದ ಮೈಸೂರು ಜಿಲ್ಲೆಯ ಟಿ.ನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮುಡುಕುತೊರೆ ಶ್ರೀ ಮಲ್ಲಿಕಾರ್ಜುನಸ್ವಾಮಿ ದೇವಾಲಯದ ಕಟ್ಟಡ ಶಿಥಿಲಗೊಂಡಿರುವ ಕೆಲವು ಭಾಗಗಳನ್ನು ಅಭಿವೃದ್ಧಿಗೊಳಿಸುವ ಕಾಮಗಾರಿಗಾಗಿ ರೂ.200-00ಲಕ್ಷಗಳ ಅನುದಾನವು ಮಂಜೂರಾಗಿರುತ್ತದೆ.

- ಮುಡುಕುತೊರೆ ಶ್ರೀ ಮಲ್ಲಿಕಾರ್ಜುನಸ್ವಾಮಿ ದೇವಸ್ಥಾನದಲ್ಲಿ ಮಾಘಮಾಸದ ಶುಕ್ಲಪಕ್ಷದ ರೋಹಿಣಿ ನಕ್ಷತ್ರದಲ್ಲಿ ಜಾತ್ರಾ ಮಹೋತ್ಸವವು ಹಾಗೂ ದನಗಳ ಜಾತ್ರೆಯು ಜರುಗುತ್ತದೆ. ಈ ಸಂದರ್ಭ ಅಗತ್ಯ ಮೂಲಭೂತ ಸೌಕರ್ಯಗಳನ್ನು ವಿವಿಧ ಇಲಾಖೆಗಳ ಸಹಕಾರ ಸಹಯೋಗದೊಂದಿಗೆ ದೇವಸ್ಥಾನದ ವತಿಯಿಂದ ಒದಗಿಸಲಾಗುತ್ತಿರುತ್ತದೆ.

- ಈ ದೇವಸ್ಥಾನಕ್ಕೆ ಪ್ರಾಧಿಕಾರ ರಚನೆ ಮಾಡುವ ಕುರಿತು ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಸಂಖ್ಯೆ:145 ಮುಸಪ್ರ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು